Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

20.08.2024 18.40 hrs

<><*<><>*><>

**ಮುಖ್ಯಾಂಶಗಳು**

- ದೇವರಾಜ ಅರಸು ಅವರಿಗೆ ಮರಣೋತ್ತರ ಭಾರತ ರತ್ನ ಪ್ರಶಸ್ತಿಗೆ ರಾಜ್ಯ ಶಿಫಾರಸ್ಸು
- ನಾಡಿನಾದ್ಯಂತ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಆಚರಣೆ
- ೩೭೧-ಜೆ ವಿಧಿ ಜಾರಿಗೆ ೧೦ ವರ್ಷ ; ಸಂಭ್ರಮಾಚರಣೆಗೆ ಸರ್ಕಾರದ ಸಿದ್ಧತೆ
- ಮಂಕಿಪಾಕ್ಸ್ ಸೋಂಕಿನ ಬಗ್ಗೆ ಜನತೆ ಆತಂಕಪಡುವ ಅಗತ್ಯವಿಲ್ಲ - ಸಚಿವ ದಿನೇಶ್ ಗುಂಡೂರಾವ್

<><*<><>*><>

ಇಂದು ಮಾಜಿ ಮುಖ್ಯಮಂತ್ರಿ, ಸಾಮಾಜಿಕ ಹರಿಕಾರ ದೇವರಾಜ ಅರಸು ಅವರ ೧೦೯ನೇ ಜನ್ಮ ದಿನಾಚರಣೆಯನ್ನು ನಾಡಿನಾದ್ಯಂತ ಸಂಭ್ರಮದಿಂದ ಆಚರಿಸಲಾಯಿತು. ವಿಧಾನಸೌಧದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡು ಗಣ್ಯರಿಗೆ 'ದಿವಂಗತ ದೇವರಾಜ ಅರಸು ಪ್ರಶಸ್ತಿ' ಪ್ರಧಾನ ಮಾಡಿದರು. ಬಳಿಕ ಅವರು ಮಾತನಾಡಿ, ದೇವರಾಜ ಅರಸು ಅವರಿಗೆ ಮರಣೋತ್ತರವಾಗಿ ಭಾರತ ರತ್ನ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಹಾಗೂ ಎಲೆಕ್ಟ್ರಾನಿಕ್ ಸಿಟಿಗೆ ದೇವರಾಜು ಅರಸು ಎಲೆಕ್ಟ್ರಾನಿಕ್ ಸಿಟಿ ಎಂದು ಮರು ನಾಮಕರಣ ಮಾಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಅರಸು ಅವರು, ಉಳುವವನೇ ಭೂಮಿಯ ಒಡೆಯ ಎಂದು ಭೂಸುಧಾರಣೆ ಕಾಯ್ದೆಗೆ ತಿದ್ದುಪಡೆ ಮಾಡಿ ಅಸಂಖ್ಯಾತ ಜನರಿಗೆ ಭೂಮಿಯ ಮಾಲೀಕತ್ವ ನೀಡಿದರು. ಪರಿಶಿಷ್ಟ ಸಮುದಾಯದ ಭೂಮಿಯ ಹಕ್ಕನ್ನು ಖಾತ್ರಿ ಪಡಿಸಲು ೭೯-ಎ ಮತ್ತು ಬಿ ಗೆ ಮಾಡಿರುವ ತಿದ್ದುಪಡಿಯನ್ನು ಮತ್ತೆ ಸರಿಪಡಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು. ರಾಜ್ಯದ ವಿವಿಧೆಡೆ ದೇವರಾಜ ಅರಸು ಅವರ ೧೦೯ನೇ ಜನ್ಮದಿನಾಚರಣೆ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿಯಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಮಾತನಾಡಿದ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ, ರಾಜ್ಯದ ಅಭಿವೃದ್ಧಿಗೆ ಅರಸು ಅವರ ಕೊಡುಗೆ ಅಪಾರ, ಜಿಲ್ಲೆಯಲ್ಲಿ ಅರಸು ಹೆಸರಿನಲ್ಲಿರುವ ಶಿಕ್ಷಣ ಸಂಸ್ಥೆ ಕಟ್ಟಡಗಳ ಕೆಲಸವನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲಾಗುವುದು, ಹಿಂದುಳಿದ ವರ್ಗಗಳ ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಚಿತ್ರದುರ್ಗದಲ್ಲಿ ಜಿಲ್ಲಾಡಳಿತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ದೇವರಾಜ ಅರಸು ಅವರು, ರಾಷ್ಟ್ರ ಕಂಡ ಅಪ್ರತಿಮ ಮುತ್ಸದಿ, ರಾಜಕಾರಣಿ, ಅವರು ಜಾರಿಗೆ ತಂದ ಸುಧಾರಣೆಯಿಂದಾಗಿ ರಾಜ್ಯದ ಹಿಂದುಳಿದ ವರ್ಗಗಳು ಸಾಮಾಜಿಕವಾಗಿ ಅಭಿವೃದ್ಧಿಯಾಗಿವೆ ಎಂದರು. ಬೆಳಗಾವಿಯಲ್ಲಿ ಮಾತನಾಡಿದ ರಾಜ್ಯಸಭಾ ಸದಸ್ಯರ ಈರಣ್ಣ ಕಡಾಡಿ, ಹಿಂದುಳಿದ ಸಮುದಾಯಗಳ ಜನರಿಗೆ ಗೌರವದ ಬದುಕು ಕಟ್ಟಿಕೊಳ್ಳಲು ಪ್ರಥಮವಾಗಿ ಪ್ರಯತ್ನಿಸಿದ ದೇವರಾಜ ಅರಸು ಅವರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು. ಬಳ್ಳಾರಿಯಲ್ಲಿ ದೇವರಾಜ ಅರಸು ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಪ್ರಶಾಂತ ಕುಮಾರ್ ಮಿಶ್ರಾ ಪುಷ್ಪನಮನ ಸಲ್ಲಿಸಿದರು. ಬಳಿಕ ಅವರು, ದೇವರಾಜ ಅರಸು ಅವರ ಬದುಕು, ಕೆಲಸಗಳು ನಮಗೆ ಮಾರ್ಗದರ್ಶಿಯಾಗಿವೆ ಎಂದರು. ಹಾಸನದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ದೇವರಾಜ ಅರಸು ಅವರು, ನಾಡಿನ ಶ್ರೇಷ್ಠ ಮುತ್ಸದಿ ರಾಜಕಾರಣಿಯಾಗಿ ಮಾಡಿರುವ ಜನಪರ ಕೆಲಸಗಳು ಇಂದಿಗೂ ಮಾಸದಂತೆ ಉಳಿದಿವೆ ಎಂದು ಸ್ಮರಿಸಿದರು. ಗದಗನಲ್ಲಿ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು,

ದೇವರಾಜ ಅರಸು ಮತ್ತು ನಾರಾಯಣ ಗುರುಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜೀತ ಪದ್ಧತಿ, ಮಲ ಹೊರುವ ಪದ್ಧತಿಯೂ ಸೇರಿದಂತೆ ಹಲವು ಸಾಮಾಜಿಕ ಅನಿಷ್ಟಗಳಿಂದ ಶೋಷಿತ ಸಮುದಾಯಗಳನ್ನು ವಿಮೋಚನೆಗೊಳಿಸಲು ಪ್ರಾಮಾಣಿಕ ಕೆಲಸ ಮಾಡಿದ ಧೀಮಂತ ನಾಯಕ ದೇವರಾಜ ಅರಸು ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ತಿಳಿಸಿದರು.

<><*<><>*><>

ನಾಡಿನ ವಿವಿಧೆಡೆ ಇಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಆಚರಿಸಲಾಯಿತು. ನಾರಾಯಣ ಗುರುಗಳು ತಮ್ಮ ಚಳುವಳಿಯ ಉದ್ದಕ್ಕೂ ದೇವಾಲಯಗಳನ್ನು ಸಾಮಾಜಿಕ ಪರಿವರ್ತನೆಯ ಸಾಧನವನ್ನಾಗಿ ಬಳಸಿದರು. ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಕ್ಷೇತ್ರದಲ್ಲಿ ಪರಿವರ್ತನೆ ಮಾಡಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಕೋಲಾರದಲ್ಲಿ ನಾರಾಯಣಗುರುಗಳ ಭಾವಚಿತ್ರಕ್ಕೆ ಶಾಸಕ ಕೊತ್ತನೂರು ಮಂಜುನಾಥ್ ಪುಷ್ಪ ನಮನ ಸಲ್ಲಿಸಿದರು. ಬಳಿಕ ಅವರು ಮಾತನಾಡಿ, ಸಮಾಜದಲ್ಲಿನ ಶೋಷಣೆಮುಕ್ತ ಬದುಕಿಗಾಗಿ ನಾರಾಯಣಗುರುಗಳು ಬಹುಮುಖ್ಯ ಪಾತ್ರವಹಿಸಿದ್ದಾರೆ ಎಂದು ಸ್ಮರಿಸಿದರು. ಚಿತ್ರದುರ್ಗದಲ್ಲಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ನಾರಾಯಣ ಗುರುಗಳ ತತ್ವಾದರ್ಶಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿ ನಾರಾಯಣ ಗುರು ಜಯಂತಿ ಆಚರಿಸಲಾಯಿತು. ಶಾಸಕ ಧೀರಜ್ ಮುನಿರಾಜು ಮಾತನಾಡಿ, ನಾರಾಯಣ ಗುರುಗಳು ಸಮಾಜದ ಅಸಮಾನತೆ ವಿರುದ್ಧ ದನಿ ಎತ್ತಿ, ಪ್ರತಿಯೊಬ್ಬರಿಗೂ ಶಿಕ್ಷಣ ದೊರೆಯಬೇಕು ಎಂದು ಹೋರಾಡಿದ್ದರು ಎಂದು ತಿಳಿಸಿದರು.

<><*<><>*><>

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಹೊಸ ಭಾಷ್ಯವನ್ನೇ ಬರೆದ ೩೭೧-ಜೆ ಕಾಯ್ದೆ ಜಾರಿಗೆ ಬಂದು ೧೦ ವರ್ಷಗಳಾಗುತ್ತಿದ್ದು, ಇದರ ಸಂಭ್ರಮಾಚರಣೆಗೆ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಕಲಬುರಗಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್ ೩೭೧-ಜೆ ಕಾಯ್ದೆ ಜಾರಿಯಾದ ಪರಿಣಾಮ ಈ ವಿಭಾಗದಲ್ಲಿ ಕಳೆದ ಒಂದು ದಶಕದಲ್ಲಿ ಹಲವಾರು ಗಮನಾರ್ಹ ಬದಲಾವಣೆಯಾಗಿದೆ. ಈ ನಿಟ್ಟಿನಲ್ಲಿ ಸಂಭ್ರಮಾಚರಣೆ ಆಚರಿಸಲಾಗುತ್ತಿದ್ದು, ಸಮಾರಂಭಕ್ಕೆ ವಿಧಾನಸಭೆ ಮತ್ತು ವಿಧಾನಪರಿಷತ್‌ನ ವಿರೋಧ ಪಕ್ಷದ ನಾಯಕರನ್ನು ಆಹ್ವಾನಿಸಲಾಗುವುದು ಎಂದು ತಿಳಿಸಿದರು. ಕಲಬುರಗಿಯಲ್ಲಿ ವಿಮಾನ ನಿಲ್ದಾಣ ಸ್ಥಾಪನೆಯಾಗಿದ್ದು, ೩೭೧ ಹಾಸಿಗೆಯ ಜಯದೇವ ಆಸ್ಪತ್ರೆ ಲೋಕಾರ್ಪಣೆಗೆ ಸಜ್ಜಾಗಿದೆ. ಕಿದ್ವಾಯಿ ಆಸ್ಪತ್ರೆ ಕಟ್ಟಡ ವಿಸ್ತರಣೆಗೊಳ್ಳಲಿದೆ. ಮುಂದಿನ ದಿನಗಳಲ್ಲಿ ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆ ಬರಲಿದ್ದು, ಕಲಬುರಗಿಯನ್ನು ಮೆಡಿಕಲ್ ಹಬ್ ಆಗಿ ಪರಿವರ್ತಿಸಲಾಗಿದೆ. ಇದರಿಂದ ರೋಗಿಗಳು ಚಿಕಿತ್ಸೆಗೆ ಹೈದರಾಬಾದ್-ಬೆಂಗಳೂರು ಮತ್ತಿತರ ಕಡೆಗಳಲ್ಲಿ ಹೋಗುವುದು ತಪ್ಪಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

<><*<><>*><>

ಮಂಕಿಪಾಕ್ಸ್ ಸೋಂಕಿನ ಬಗ್ಗೆ ರಾಜ್ಯದ ಜನರು ಗಾಬರಿ, ಆತಂಕಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು ಈವರೆಗೆ ದೇಶದಲ್ಲಿ ಒಂದೇ ಒಂದು ಮಂಕಿಪಾಕ್ಸ್ ಪ್ರಕರಣ ಪತ್ತೆಯಾಗಿಲ್ಲ. ಆದರೂ ರಾಜ್ಯ ಸರ್ಕಾರದಿಂದ ಈಗಾಗಲೇ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕೇಂದ್ರದಿಂದ ಅಧಿಕೃತ ಮಾರ್ಗಸೂಚಿ ಬರದೇ ಇದ್ದರೂ ರಾಜ್ಯ ಆರೋಗ್ಯ ಇಲಾಖೆಯಿಂದ ಜಿಲ್ಲಾ ಆರೋಗ್ಯ ಕೇಂದ್ರಗಳವರೆಗೂ ಮುನ್ನೆಚ್ಚರಿಕೆ ನೀಡಲಾಗಿದೆ. ನಾಡಿನ ಜನರು ಗಾಬರಿಪಡುವ ಅವಶ್ಯಕತೆ ಇಲ್ಲ ಎಂದು ಅವರು ಹೇಳಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ನಿರ್ದೇಶನದಂತೆ 'ಲ್ಯಾಟರಲ್ ಎಂಟ್ರಿ' ಜಾಹಿರಾತನ್ನು ರದ್ದುಗೊಳಿಸುವಂತೆ ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಆಡಳಿತ ಮತ್ತು ಪಿಂಚಣಿ ಸಹಾಯಕ ಸಚಿವ ಡಾ. ಜಿತೇಂದ್ರ ಸಿಂಗ್ ಯುಪಿಎಸ್‌ಸಿ ಗೆ ಸೂಚಿಸಿದ್ದಾರೆ. ಕೇಂದ್ರ ಸರ್ಕಾರದ ವಿವಿಧ ಹಿರಿಯ ಹುದ್ದೆಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ ಭರ್ತಿ ಮಾಡಲು ಯುಪಿಎಸ್‌ಸಿ ಇತ್ತೀಚೆಗೆ ಜಾಹಿರಾತು ಹೊರಡಿಸಿತ್ತು. ಈ ಸಂಬಂಧ ಇಂದು ಸರ್ಕಾರ ಯುಪಿಎಸ್‌ಸಿ ಗೆ ಪತ್ರ ಬರೆದಿದ್ದು, ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಎತ್ತಿ ಹಿಡಿಯುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿರುವುದಾಗಿ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

<><*<><>*><>

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರದ ಬಸವಸಾಗರ ಜಲಾಶಯ ಭರ್ತಿಯಾದ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಇಂದು ವಿಶೇಷ ಪೂಜೆ ಸಲ್ಲಿಸಿ, ಬಾಗಿನ ಅರ್ಪಿಸಿದರು. ಬಳಿಕ ಮಾತನಾಡಿದ ಅವರು, ಈ ಬಾರಿ ಉತ್ತಮ ಮಳೆಯಾಗಿದ್ದು, ಜನರಲ್ಲಿ ಆತಂಕ ದೂರವಾಗಿದೆ. ಕುಡಿಯುವ ನೀರು ಹಾಗೂ ರೈತರ ಜಮೀನುಗಳಿಗೆ ಕಾಲುವೆಗಳ ಮೂಲಕ ನೀರನ್ನು ಹರಿಸಲಾಗುತ್ತಿದೆ ಎಂದು ಹೇಳಿದರು. ಶಾಸಕರಾದ ರಾಜವೇಣುಗೋಪಾಲ, ಸಿ.ಎಸ್. ನಾಡಗೌಡ, ಜಿಲ್ಲಾಧಿಕಾರಿ ಡಾ. ಬಿ. ಸುಶೀಲಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಮಾಜಿ ಪ್ರಧಾನಿ ದಿವಂಗತ ರಾಜೀವ್‌ಗಾಂಧಿ ಅವರ ಜನ್ಮ ದಿನವಾದ ಇಂದು ಸದ್ಭಾವನಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಜ್ಞಾವಿಧಿ ಬೋಧಿಸಿದರು. ರಾಜೀವ್‌ಗಾಂಧಿ ಅವರು, ತಂತ್ರಜ್ಞಾನ ಕ್ರಾಂತಿ, ಪಂಚಾಯತ್ ರಾಜ್ ವ್ಯವಸ್ಥೆ ಜಾರಿ ಮತದಾನದ ವಯಸ್ಸಿನ ಇಳಿಕೆ ಮತ್ತಿತರ ಸುಧಾರಣಾ ಕ್ರಮಗಳನ್ನು ಕೈಗೊಂಡು ಸದೃಢ, ಸಮೃದ್ಧ, ಆಧುನಿಕ ಭಾರತ ನಿರ್ಮಾಣಕ್ಕೆ ಮುನ್ನುಡಿ ಬರೆದ ದೂರದೃಷ್ಟಿಯ ಮುತ್ಸದಿ ಆಡಳಿತಗಾರ ಎಂದು ಸಾಮಾಜಿಕ ಜಾಲತಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣಿಸಿದ್ದಾರೆ. ಬೆಂಗಳೂರಿನ ಶೇಷಾದ್ರಿಪುರ ವೃತ್ತದಲ್ಲಿ ರಾಜೀವ್‌ಗಾಂಧಿ ಪ್ರತಿಮೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪುಷ್ಪನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ರಾಜೀವ್‌ಗಾಂಧಿ ಅವರ ಆಲೋಚನೆಗಳು ಇಂದಿನ ಯುವಪೀಳಿಗೆಗೆ ಸ್ಫೂರ್ತಿಆದ ಕಾರಣ ಪ್ರತಿವರ್ಷ ಇವರ ಜನ್ಮದಿನವನ್ನು ಬಿಬಿಎಂಪಿಯಿಂದ ನಡೆಸಬೇಕು ಎಂದು ಆದೇಶ ನೀಡಲಾಗುವುದು ಎಂದರು.

<><*<><>*><>

ಯಾದಗಿರಿ ಜಿಲ್ಲೆಯಲ್ಲಿ ಅನರ್ಹ ಬಿಪಿಎಲ್ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಅವುಗಳನ್ನು ರದ್ದುಪಡಿಸುವ ಅಭಿಯಾನ ಪ್ರಾರಂಭಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ಅನಿಲ್ ಕುಮಾರ್ ಢವಳಗಿ ತಿಳಿಸಿದ್ದಾರೆ. ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಸರ್ಕಾರಿ ನೌಕರರಿಗೆ ನಿಯಮಾನುಸಾರ ನೋಟಿಸ್ ನೀಡಿದ್ದು, ಅವರು ಕಳೆದ ಮೂರು ವರ್ಷದಲ್ಲಿ ಈವರೆಗೆ ಪಡೆದಿರುವ ಪಡಿತರ ವಸ್ತುಗಳ ಒಟ್ಟು ಮೊತ್ತವನ್ನು ದಂಡದ ರೂಪದಲ್ಲಿ ವಸೂಲಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಬರುವ ಜಿಲ್ಲೆಗಳಲ್ಲಿ ರಾಜೀವ್‌ಗಾಂಧಿ ಪಂಚಾಯತ್ ಫೆಲೊಶಿಪ್ ಆರಂಭಿಸಿದೆ. ಕಲ್ಯಾಣ ಕರ್ನಾಟಕ ವ್ಯಾಪ್ತಿಯ ೭ ಜಿಲ್ಲೆಗಳ ಎಲ್ಲಾ ೫೧ ತಾಲೂಕುಗಳಲ್ಲಿ ಪ್ರತಿ ತಾಲೂಕಿಗೆ ಒಬ್ಬರಂತೆ ಫೆಲೊಗಳನ್ನು ೨ ವರ್ಷಗಳ ಅವಧಿಗೆ ನೇಮಕ ಮಾಡಲು ಆದೇಶಿಸಲಾಗಿದೆ. ಪ್ರಸ್ತುತ ೪೪ ಫೆಲೊಗಳು ನೇಮಕಗೊಂಡಿದ್ದು, ಅವರಿಗೆ ಸ್ಥಳೀಯ ಆಡಳಿತ ಬಲವರ್ಧನೆಯಲ್ಲಿ ಅನೇಕ ಜವಾಬ್ದಾರಿ ನೀಡಲಾಗಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧.   ಆಲಮಟ್ಟಿ ಜಲಾಶಯ ಭರ್ತಿ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ನಾಳೆ ಬಾಗಲಕೋಟೆಯಲ್ಲಿ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಿಸಲಿದ್ದಾರೆ.

೨.   ಕೃಷಿ ಸಚಿವ ಚೆಲುವರಾಯಸ್ವಾಮಿ ನಾಳೆ ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು, ಹೊರವಲಯದ ಬೀಜ ನಿಗಮದ ಆವರಣದಲ್ಲಿ ಸೆಂಟರ್ ಆಫ್ ಎಕ್ಸ್‌ಲೆನ್ಸ್ ಕಟ್ಟಡ ಉದ್ಘಾಟಿಸಲಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ಒಳನಾಡಿನಲ್ಲಿ ನೈಋತ್ಯ ಮುಂಗಾರು ಚುರುಕಾಗಿದ್ದು, ಕರಾವಳಿಯಲ್ಲಿ ದುರ್ಬಲಗೊಂಡಿತ್ತು. ರಾಜ್ಯದ ಹಲವೆಡೆ ಮಳೆಯಾಗಿದೆ. ಗಂಗಾವತಿ, ಕುರ್ಡಿ, ಬೇಲೂರು ತಲಾ ೯, ಕಂಪ್ಲಿ ೮, ಗಂಗಾವತಿ, ಮಾನ್ವಿ, ಕುಡತಿನಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ರಾಯಚೂರು, ಕೊಪ್ಪಳ, ಶಿವಮೊಗ್ಗ, ಮೈಸೂರು, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ಹಲವೆಡೆ ಗುಡುಗು ಸಹಿತ ಮಳೆ ನಿರೀಕ್ಷಿತ. ಉತ್ತರಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯ ಅಲ್ಲಲ್ಲಿ ಭಾರೀ ಮಳೆ, ದಕ್ಷಿಣ ಒಳನಾಡು ಮತ್ತು ಉತ್ತರ ಒಳನಾಡಿನ ಬಹುತೇಕ ಕಡೆ ಸಾಧಾರಣದಿಂದ ಹಗುರ ಮಳೆ ಸಾಧ್ಯತೆ.  ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆ ನಿರೀಕ್ಷಿತ. ಗರಿಷ್ಠ ೩೧, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>  ನಮ್ಮ ಮುಂದಿನ ಮುಂದಿನ ವಾರ್ತಾ ಪ್ರಸಾರ <>*><>